೪) ಶಾಸನ ರಚನೆ.

ಎ) ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕ, ೨೦೦೧ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಚ್.ಸಿ.ಶ್ರೀಕಂಠಯ್ಯ(ಮಾನ್ಯ ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, ''2001ರ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''2001ರ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಚ್.ಸಿ.ಶ್ರೀಕಂಠಯ್ಯ(ಮಾನ್ಯ ಕಂದಾಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ''2001ರ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು'' ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.*

(ಬ) ವಿಧೇಯಕವನ್ನು ಹಿಂತೆಗೆದುಕೊಳ್ಳುವುದು

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, ೨೦೦೦.

ಹಿಂತೆದುಕೊಳ್ಳಲು ಅನುಮತಿ ಕೋರಿಕೆ

ಡಾ: ಜಿ.ಪರಮೇಶ್ವರ (ಮಾನ್ಯ ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ, ''2000ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಹಿಂತೆಗದುಕೊಳ್ಳಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''2000ರ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು'' ಹಿಂತೆಗದುಕೊಳ್ಳಲು ಅನುಮತಿ ನೀಡುವುದು''.

---

* ಅನುಬಂಧ-I